ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿಯ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

275 (464) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲೆ, ಕೆರೆಗೋಡು ಹೋಬಳಿ ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿ ಅಂದಾಜಿನಲ್ಲಿ ಗೂಳೂರು ಬೆಟ್ಟದ ಬಳಿ 150 ಮೀಟರ್ ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಸಂಬಂಧ ಸಮೀಕ್ಷಾ ಕಾರ್ಯಕೈಗೊಂಡು ವಿನ್ಯಾಸ ಹಾಗೂ ಸಾಧ್ಯಾಸಾಧ್ಯತೆ ಬಗ್ಗೆ ಪರಿಶೀಲನೆಯನ್ನು ಯಾವಾಗ ನಡೆಸಲಾಗಿದೆ; ಸಮೀಕ್ಷಾ ಕಾರ್ಯ ಹಾಗೂ ಸಾಧ್ಯಾಸಾಧ್ಯತೆಯ ವರದಿಯ ಅಂಶಗಳೇನು;

(ಆ) ಸದರಿ ಕಾಮಗಾರಿಯನ್ನು ಟೆಂಡರ್ ಪಡೆದ ಗುತ್ತಿಗೆದಾರರು ಒಪ್ಪಂದ ಮಾಡಿಕೊಳ್ಳಲು ನಿರಾಕರಿಸುತ್ತಿರುವುದಕ್ಕೆ ಕಾರಣಗಳೇನು; ಮರು ಟೆಂಡರ್ ಕರೆಯಲಾಗಿದೆಯೇ; ಮರು ಟೆಂಡರ್ ಕರೆಯದಿರಲು ಕಾರಣಗಳೇನು;

(ಇ) ಕಾವೇರಿ ನೀರಾವರಿ ನಿಗಮದ ಮಂಡಳಿಯ 70ನೇ ಸಭೆಯಲ್ಲಿ ಈ ಕಾಮಗಾರಿಯನ್ನು ಕೈಬಿಟ್ಟಿರುವುದು ನಿಜವೇ; ಹಾಗಿದ್ದಲ್ಲಿ, ಕಾರಣಗಳೇನು;

(ಈ) ಸದರಿ ಕಾಮಗಾರಿಯಿಂದ ರೈತರಿಗೆ/ಸಾರ್ವಜನಿಕರಿಗೆ ತುಂಬಾ ಉಪಯೋಗವಾಗಲಿದ್ದು, ಈ ಕಾಮಗಾರಿಯನ್ನು ಮತ್ತೆ ಕೈಗೆತ್ತಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಈ ಕುರಿತು ಸರ್ಕಾರದ ನಿಲುವೇನು?